Akashvani : Bangalore
Regional Bulletin In Kannada
07.03.2025 / 18.40 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

- ರಾಜ್ಯ ಬಜೆಟ್ - ಪ್ರಸಕ್ತ ಆಯವ್ಯಯದಲ್ಲಿ ಆರ್ಥಿಕ ಶಿಸ್ತು ಪಾಲನೆ - ಮುಖ್ಯಮಂತ್ರಿ ಸಿದ್ದರಾಮಯ್ಯ ಸಮರ್ಥನೆ
- ರಾಜ್ಯದಲ್ಲಿ ೫೦೦ ಹೊಸ ಕರ್ನಾಟಕ ಪಬ್ಲಿಕ್ ಶಾಲೆ ; ನಕ್ಸಲ್ ಪೀಡಿತ ಪ್ರದೇಶಗಳಿಗೆ ಪ್ಯಾಕೇಜ್ ಘೋಷಣೆ ; ಅಬಕಾರಿ ಇಲಾಖೆಗೆ ಆದಾಯದ ಗುರಿ ನೀಡಿದ ಸರ್ಕಾರ
- ಜನರ ನಿರೀಕ್ಷೆ ಹುಸಿಯಾಗಿಸಿದ ರಾಜ್ಯ ಬಜೆಟ್ ; ಬಿಜೆಪಿ ನಾಯಕರಿಂದ ಅಸಮಾಧಾನ
- ಮುಖ್ಯಮಂತ್ರಿ ಸಿದ್ದರಾಮಯ್ಯ ಬಜೆಟ್‌ಗೆ ಕೈಗಾರಿಕೋದ್ಯಮಿಗಳು ರೈತರಿಂದ ಮಿಶ್ರ ಪ್ರತಿಕ್ರಿಯೆ
- ದೇಶದಲ್ಲಿ ಜನರ ಆರೋಗ್ಯ ಸುಧಾರಿಸುವತ್ತ ಕೇಂದ್ರ ಸರ್ಕಾರದಿಂದ ಮಹತ್ವದ ಹೆಜ್ಜೆ - ಗೃಹ ಸಚಿವ ಅಮಿತ್ ಶಾ
- ಮೈಸೂರು ಆಕಾಶವಾಣಿಗೆ ೯೦ ವರ್ಷ ಪೂರೈಸಿದ ಹಿನ್ನೆಲೆ ; ನುಡಿ ನಾದ ಸಂಗಮ ಉದ್ಘಾಟಿಸಿದ ಮಹಾನಿರ್ದೇಶಕಿ ಡಾ. ಪ್ರಜ್ಞಾ ಪಾಲಿವಾಲ್ ಗೌರ್

**<><*<><>*><>**

ತಾವು ಮಂಡಿಸಿದ ಬಜೆಟ್ ಬಡವರು, ಮಹಿಳೆಯರು, ಹಾಗೂ ದುರ್ಬಲ ವರ್ಗದವರ ಪರವಾಗಿದ್ದು, ಸಾಮಾಜಿಕ ನ್ಯಾಯ ಹೊಂದಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸಮರ್ಥಿಸಿಕೊಂಡಿದ್ದಾರೆ. ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಆರ್ಥಿಕ ಶಿಸ್ತು ಪಾಲನೆ ಮಾಡಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಅಲ್ಪಸಂಖ್ಯಾತರಿಗೆ ಬಜೆಟ್ ಅನುದಾನ ಹೆಚ್ಚಿಸಲಾಗಿದೆ ಎಂದು ತಿಳಿಸಿದ್ದಾರೆ.

ಧ್ವನಿ : ಮುಖ್ಯಮಂತ್ರಿ ಸಿದ್ದರಾಮಯ್ಯ

**<><*<><>*><>**

ಮುಖ್ಯಮಂತ್ರಿ ಸಿದ್ದರಾಮಯ್ಯ ೨೦೨೫-೨೬ ನೇ ಸಾಲಿನಲ್ಲಿ ೧೬ ನೇ ಬಜೆಟ್ ಮಂಡಿಸುವ ಮೂಲಕ ದಾಖಲೆ ನಿರ್ಮಿಸಿದ್ದಾರೆ. ಪ್ರಸಕ್ತ ಸಾಲಿನ ಬಜೆಟ್ ಗಾತ್ರ ೪ ಲಕ್ಷದ ೯ ಸಾವಿರದ ೫೪೯ ಕೋಟಿ ರೂಪಾಯಿ ದಾಟುವ ಮೂಲಕ ವಿಶೇಷ ದಾಖಲೆ ನಿರ್ಮಾಣ ಮಾಡಿದ್ದಾರೆ. ೧೯ ಸಾವಿರದ ೨೬೨ ಕೋಟಿ ರೂಪಾಯಿಗಳ ಕೊರತೆ ಬಜೆಟ್ ನ್ನು ಮಂಡಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ೧ ಲಕ್ಷದ ೧೬ ಸಾವಿರ ಕೋಟಿ ರೂಪಾಯಿ ಸಾಲ ಪಡೆಯಲಾಗುತ್ತಿದೆ ಎಂದು ತಿಳಿಸಿದ್ದಾರೆ. ಆರಂಭದಲ್ಲಿ ನಿಂತುಕೊಂಡೆ ಬಜೆಟ್ ಓದಲು ಆರಂಭಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಮೊಣಕಾಲು ನೋವಿನ ಹಿನ್ನಲೆಯಲ್ಲಿ ಸಭಾಧ್ಯಕ್ಷರ ಒಪ್ಪಿಗೆ ಪಡೆದು ಕುಳಿತುಕೊಂಡೆ ಬಜೆಟ್ ಓದಿದರು. ಅಂದಾಜು ಮೂರು ಗಂಟೆಗೂ ಹೆಚ್ಚುಕಾಲ ಸಿದ್ದರಾಮಯ್ಯ ಬಜೆಟ್ ಮಂಡಿಸಿದ್ದು, ಬಜೆಟ್ ನಲ್ಲಿ ಗ್ಯಾರಂಟಿ ಹಾಗೂ ಕಲ್ಯಾಣ

ಕಾರ್ಯಕ್ರಮಗಳಿಗೆ ದೊಡ್ಡ ಮೊತ್ತದ ಹಣ ನಿಗದಿ ಮಾಡಲಾಗಿದೆ. ಬಜೆಟ್ ನಲ್ಲಿ ವಾಣಿಜ್ಯ ತೆರಿಗೆ, ಅಬಕಾರಿ, ನೋಂದಣಿ ಮತ್ತು ಮುದ್ರಾಂಕ ಹಾಗೂ ಮೋಟಾರು ವಾಹನ ವಿಭಾಗದಿಂದ ದೊಡ್ಡ ಮಟ್ಟದ ಆದಾಯ ನಿರೀಕ್ಷಿಸಲಾಗಿದೆ. ಬಜೆಟ್ ನಲ್ಲಿ ೩ ಸಾವಿರ ಕೋಟಿ ರೂಪಾಯಿಯಿಂದ ೭ ಸಾವಿರ ಕೋಟಿ ರೂಪಾಯಿಗೆ ಹೆಚ್ಚಿಸುವ ಮೂಲಕ  ಬೆಂಗಳೂರು ನಗರಕ್ಕೆ ಹೆಚ್ಚಿನ ಕೊಡುಗೆ ನೀಡಿದ್ದಾರೆ.

ಈ ಕುರಿತು ಒಂದು ವರದಿ

ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ಇಂದು ತಮ್ಮ ದಾಖಲೆಯ ೧೬ನೇ ಬಜೆಟ್ ಮಂಡಿಸಿದ್ದಾರೆ. ರಾಜ್ಯವು ಶೇಕಡ ೭.೪ ರಷ್ಟು ಜಿಎಸ್‌ಡಿಪಿ ಬೆಳವಣಿಗೆ ದರವನ್ನು ಸಾಧಿಸುವ ವಿಶ್ವಾಸದಲ್ಲಿದೆ ಎಂದು ಅವರು ತಿಳಿಸಿದ್ದಾರೆ. "ಕರ್ನಾಟಕವು ಭಾರತದಲ್ಲಿ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ರಾಜ್ಯಗಳಲ್ಲಿ ಒಂದಾಗಿದೆ, ಇದು ರಾಷ್ಟ್ರೀಯ ಒಟ್ಟು ದೇಶೀಯ ಉತ್ಪನ್ನಕ್ಕೆ  ಶೇಕಡಾ ೮.೪ ರಷ್ಟು ಕೊಡುಗೆ ನೀಡಲಿದೆ. ರಾಷ್ಟ್ರೀಯ ಬೆಳವಣಿಗೆ ದರವಾದ ಶೇಕಡಾ ೬.೪ ಕ್ಕಿಂತ ಹೆಚ್ಚಿನದನ್ನು ಗಳಿಸಿ ಶೇಕಡಾ ೭.೪ ರಷ್ಟು ಉSಆP ಬೆಳವಣಿಗೆಯ ದರವನ್ನು ಸಾಧಿಸಲು ಸಜ್ಜಾಗಿದೆ. ಎಂದು ಹೇಳಿದ್ದಾರೆ ಪ್ರವರ್ಗ ೧, ೨ಎ, ೨ಬಿ ಮುಸಲ್ಮಾನ ಸಮುದಾಯದವರಿಗೆ ೨ ಕೋಟಿ ರೂಪಾಯಿವರೆಗೆ ಕಾಮಗಾರಿ ಗುತ್ತಿಗೆಯಲ್ಲಿ ಮೀಸಲಾತಿ ನೀಡಲು ನಿರ್ಧರಿಸಲಾಗಿದೆ.  ಕೈಗಾರಿಕಾ ಪ್ರದೇಶ ಭೂಮಿ ಹಂಚಿಕೆಯಲ್ಲೂ ಪ್ರವರ್ಗ ೧ ೨ಎ ಜತೆ ೨ಬಿ ಮುಸ್ಲಿಂ ಗೆ ಶೇಕಡಾ ೨೦ ರಷ್ಟು ಮೀಸಲಾತಿ ಬಜೆಟ್ ನಲ್ಲಿ ಘೋಷಣೆ ಮಾಡಲಾಗಿದೆ ಜೈನ, ಬೌದ್ಧ ಹಾಗೂ ಸಿಖ್ ಸಮುದಾಯಗಳ ಅಭಿವೃದ್ಧಿಗಾಗಿ ೧೦೦ ಕೋಟಿ ರೂಪಾಯಿ ಮೀಸಲಿಡಲಾಗಿದೆ. ಕ್ರಿಶ್ಚಿಯನ್ ಸಮುದಾಯದ ಅಭಿವೃದ್ಧಿಗಾಗಿ ೨೫೦ ಕೋಟಿ ರೂಪಾಯಿ ಮೀಸಲಿಡಲಾಗಿದೆ. ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿರುವ ರಾಷ್ಟ್ರೀಯ ವಿದೇಶಿ ವಿದ್ಯಾರ್ಥಿ ವೇತನವನ್ನು ೨೦ ಲಕ್ಷದಿಂದ ೩೦ ಲಕ್ಷಕ್ಕೆ ಹೆಚ್ಚಿಸಲು ಬಜೆಟ್ ನಲ್ಲಿ ನಿರ್ಧರಿಸಲಾಗಿದೆ. ಧಾರ್ಮಿಕ ದತ್ತಿ ಇಲಾಖೆ ಅರ್ಚಕರಿಗೆ ತಸ್ತೀಕ್ ಮೊತ್ತದ ಏರಿಕೆ ಮಾಡಲು ನಿರ್ಧರಿಸಲಾಗಿದೆ. ವಾರ್ಷಿಕ  ೬೦ ಸಾವಿರ ರೂಪಾಯಿಯಿಂದ ೭೨ ಸಾವಿರಕ್ಕೆ ಏರಿಸುವುದಾಗಿ ಮುಖ್ಯಮಂತ್ರಿ ಘೋಷಿಸಿದ್ದಾರೆ.  ರಾಜ್ಯದಲ್ಲಿ ೫೦೦ ಹೊಸ ಕರ್ನಾಟಕ ಪಬ್ಲಿಕ್ ಶಾಲೆ ಆರಂಭಿಸಲು ನಿರ್ಧರಿಸಲಾಗಿದೆ.  ೧ ಸಾವಿರದ ೮೦ ಕೋಟಿ ವೆಚ್ಚದಲ್ಲಿ ವೃಷಭಾವತಿ ವ್ಯಾಲಿ ಯೋಜನೆ ಹಾಗೂ  ಎತ್ತಿನಹೊಳೆ ಯೋಜನೆಗೆ ೫೫೩ ಕೋಟಿ ರೂಪಾಯಿ ಮೀಸಲಿಡಲಾಗಿದೆ.  ನಕ್ಸಲ್ ಪೀಡಿತ ಪ್ರದೇಶಗಳ ಮೂಲಸೌಕರ್ಯ ಅಭಿವೃದ್ಧಿಗೆ ನಕ್ಸಲ್ ಪ್ಯಾಕೇಜ್ ಘೋಷಣೆ ಮಾಡಿದ್ದು, ೧೦ ಕೋಟಿ ರೂಪಾಯಿ ಅನುದಾನ ಘೋಷಣೆ ಮಾಡಲಾಗಿದೆ. ಅಬಕಾರಿ ಇಲಾಖೆಗೆ ೩೬ ಸಾವಿರದ ೫೦೦ ಕೋಟಿ ರೂಪಾಯಿ ಆದಾಯದ ಗುರಿ ನೀಡಲಾಗಿದೆ. ಕನ್ನಡ ಚಲನಚಿತ್ರೋದ್ಯಮಕ್ಕೆ "ಉದ್ಯಮ" ಸ್ಥಾನಮಾನ ನೀಡಬೇಕೆಂಬ ಬಹುದಿನಗಳ ಬೇಡಿಕೆ ಈಡೇರಿದ್ದು, ಕೈಗಾರಿಕಾ ನೀತಿಯಡಿಯಲ್ಲಿ ಒದಗಿಸಲಾದ ಸೌಲಭ್ಯಗಳನ್ನು ಚಲನಚಿತ್ರೋದ್ಯಮಕ್ಕೂ ವಿಸ್ತರಿಸಲು ನಿರ್ಧರಿಸಲಾಗಿದೆ.   ಬಜೆಟ್‌ನಲ್ಲಿ ಮಲ್ಟಿಪ್ಲೆಕ್ಸ್ ಟಿಕೆಟ್ ದರಗಳನ್ನು ೨೦೦ ರೂಪಾಯಿಗೆ ನಿಗದಿಪಡಿಸಲಾಗಿದೆ. ಬೆಂಗಳೂರು ನಗರ ವಿಶ್ವವಿದ್ಯಾಲಯವನ್ನು  ಡಾ ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾಲಯ ಎಂದು ಮರುನಾಮಕರಣ ಮಾಡಲಾಗುವುದು ಎಂದು ಮುಖ್ಯಮಂತ್ರಿ  ಬಜೆಟ್ ನಲ್ಲಿ ಪ್ರಕಟಿಸಿದ್ದಾರೆ. ರಾಜ್ಯದಲ್ಲಿ ೭೫ ವರ್ಷ ಮೇಲ್ಪಟ್ಟ  ೩.೩೦ ಲಕ್ಷ ಮಂದಿ ಹಿರಿಯ ನಾಗರಿಕರಿಗೆ ಮನೆಗಳಿಗೆ ಆಹಾರ ತಲುಪಿಸುವ ಯೋಜನೆ ಅನ್ನ-ಸುವಿಧಾ ಯೋಜನೆ ವಿಸ್ತರಣೆ ಮಾಡಲಾಗಿದೆ.  ಕರ್ನಾಟಕ ಗೃಹ ಮಂಡಳಿಯಿಂದ  ಆನೆಕಲ್ ತಾಲ್ಲೂಕಿನ ಸೂರ್ಯ ನಗರದ ೪ನೇ ಹಂತದ ಯೋಜನೆಯಡಿ ೧೬ ಸಾವಿರದ ೧೪೦ ನಿವೇಶನಗಳ ಹಂಚಿಕೆ ಗುರಿ ನಿಗದಿ ಮಾಡಲಾಗಿದೆ. ಕಟ್ಟಡ ಕಾರ್ಮಿಕರ ಮಕ್ಕಳ ವಿದ್ಯಾಭ್ಯಾಸಕ್ಕೆ ಕಟ್ಟಡ ಮತ್ತು ಇತರೆ ನಿರ್ಮಾಣ ಕಲ್ಯಾಣ ಮಂಡಳಿಯಿಂದ

೭೫೦ ಕೋಟಿ ರೂಪಾಯಿ ವೆಚ್ಚ ಮಾಡಲು ನಿರ್ಧರಿಸಲಾಗಿದೆ. ಗೃಹ ಲಕ್ಷ್ಮೀ ಮತ್ತು ಗೃಹಜ್ಯೋತಿ ಯೋಜನೆಗಳಿಗೆ ೨೮ ಸಾವಿರದ ೬೦೮ ಕೋಟಿ ರೂಪಾಯಿ ಹಾಗೂ ೧೦ ಸಾವಿರದ ೧೦೦ ಕೋಟಿ ರೂಪಾಯಿ ನೀಡಿದ್ದಾರೆ. ರಾಜ್ಯಾದ್ಯಂತ ಅಕ್ಕ ಕೆಫೆ ಮತ್ತು ಅಕ್ಕ ಸಹಕಾರಿ ಸಂಘಗಳನ್ನು ಸ್ಥಾಪಿಸಲಾಗುತ್ತಿದೆ. ಜಿಲ್ಲಾ ಪಂಚಾಯತ್ ಮತ್ತು ತಾಲೂಕು ಪಂಚಾಯತ್ ಕಚೇರಿಗಳಲ್ಲಿ ಅಕ್ಕ ಕೆಫೆ ಸ್ಥಾಪನೆ ಮಾಡುವುದಾಗಿ ಬಜೆಟ್ ನಲ್ಲಿ ಘೋಷಿಸಿದ್ದಾರೆ.

**<><*<><>*><>**

ರಾಜ್ಯ ಸರ್ಕಾರ ಜನವಿರೋಧಿ ಹಾಗೂ ಮುಸ್ಲಿಂಪರ ಬಜೆಟ್ ಮಂಡಿಸಿದೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ ಆರೋಪಿಸಿದ್ದಾರೆ. ಇತಿಹಾಸದಲ್ಲೇ ಮೊದಲ ಬಾರಿಗೆ ೧.೧೬ ಲಕ್ಷ ಕೋಟಿ ರೂಪಾಯಿ ಸಾಲ ಮಾಡಲಾಗಿದ್ದು, ಪ್ರತಿಯೊಬ್ಬರ ಮೇಲೆ ಸಾಲದ ಹೊರೆ ಹೊರಿಸಲಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಯಾವುದೇ ಹೊಸ ಯೋಜನೆಗಳನ್ನು ಘೋಷಿಸಿಲ್ಲ ಎಂದು ದೂರಿದ್ದಾರೆ. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಮಾತನಾಡಿ, ಈ ಬಜೆಟ್ ರಾಜ್ಯದ ಜನತೆಯ ನಿರೀಕ್ಷೆಯನ್ನು ಹುಸಿ ಮಾಡಿದೆ. ಉದ್ಯೋಗ ಸೃಷ್ಟಿಗೆ ಅವಕಾಶವಿರುವ ಕೈಗಾರಿಕೆಗಳಿಗೆ ಉತ್ತೇಜನವೇ ನೀಡಿಲ್ಲ ಎಂದು ಆರೋಪಿಸಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಡಿಸಿದ ಬಜೆಟ್ ಸತ್ವಹೀನವಾಗಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಪ್ರತಿಕ್ರಿಯಿಸಿದ್ದಾರೆ. ವೋಟ್ ಬ್ಯಾಂಕ್ ರಾಜಕಾರಣ ಈ ಬಜೆಟ್‌ನಲ್ಲಿ ಎದ್ದು ಕಾಣುತ್ತಿದೆ ಎಂದು ದೂರಿದ್ದಾರೆ.

**<><*<><>*><>**

ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಮಂಡಿಸಿರುವ ಬಜೆಟ್‌ಗೆ ಕೈಗಾರಿಕೋದ್ಯಮಗಳು ರೈತರಿಂದ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಗಿದೆ. ಬೆಂಗಳೂರಿನ ವಾಹನದಟ್ಟಣೆ ನಿಭಾಯಿಸಲು ಆದ್ಯತೆ ನೀಡಿರುವುದಕ್ಕೆ ಎಫ್‌ಕೆಸಿಸಿಐ ಉಪಾಧ್ಯಕ್ಷ ಸಾಯಿರಾಮ್ ಪ್ರಸಾದ್ ಸ್ವಾಗತಿಸಿದ್ದಾರೆ.

ಧ್ವನಿ : ಸಾಯಿರಾಮ್ ಪ್ರಸಾದ್

ಇದೇ ವೇಳೆ ಆಕಾಶವಾಣಿಗೆ ಬಜೆಟ್ ಕುರಿತಂತೆ ಎಫ್‌ಕೆಸಿಸಿಐ ಅಧ್ಯಕ್ಷ ಬಾಲಕೃಷ್ಣ ಪ್ರತಿಕ್ರಿಯೆ ನೀಡಿದ್ದಾರೆ.

ಧ್ವನಿ : ಬಾಲಕೃಷ್ಣ (ಎಫ್‌ಕೆಸಿಸಿಐ)

ಬಜೆಟ್ ನಲ್ಲಿ ಕೃಷಿ ಕ್ಷೇತ್ರಕ್ಕೆ ನೀಡಿರುವ ಕೊಡುಗೆಗಳ ಬಗ್ಗೆ ವಿಜಯನಗರ ಜಿಲ್ಲೆಯ ರಾಜ್ಯ ಈರುಳ್ಳಿ ಬೆಳೆಗಾರರ ಸಂಘದ ಅಧ್ಯಕ್ಷ ಎನ್.ಎಂ. ಸಿದ್ದೇಶ್ ಆಕಾಶವಾಣಿಯೊಂದಿಗೆ ತಮ್ಮ ಅನಿಸಿಕೆ ಹಂಚಿಕೊಂಡಿದ್ದಾರೆ.

ಧ್ವನಿ : ಎನ್.ಎಂ. ಸಿದ್ದೇಶ್

ಕರ್ನಾಟಕ ವಾಣಿಜ್ಯೋದ್ಯಮ ಸಂಸ್ಥೆ ಕಾರ್ಯದರ್ಶಿ ರವೀಂದ್ರ ಬಳಿಗಾರ್ ಬಜೆಟ್ ಕುರಿತು ಆಕಾಶವಾಣಿಯೊಂದಿಗೆ ತಮ್ಮ ಅನಿಸಿಕೆ ಹಂಚಿಕೊಂಡಿದ್ದಾರೆ.

ಧ್ವನಿ : ರವೀಂದ್ರ ಬಳಿಗಾರ್

<><*<><>*><>

ಬಜೆಟ್ ಕುರಿತ ಸಂವಾದ ರಾತ್ರಿ ೮ ಗಂಟೆಗೆ ಪ್ರಸಾರವಾಗಲಿದ್ದು, ಅತಿಥಿಗಳಾಗಿ ಆರ್ಥಿಕ ತಜ್ಞರಾದ ಶರಣ್ ಪಾಟೀಲ್ ಭಾಗವಹಿಸಲಿದ್ದಾರೆ. ಸಂವಾದವನ್ನು ಹಿರಿಯ ಪತ್ರಕರ್ತರಾದ ನಾರಾಯಣಸ್ವಾಮಿ ಬಿ.ಎಸ್. ನಡೆಸಿಕೊಡಲಿದ್ದಾರೆ.

***********

ವಿಧಾನಮಂಡಲದ ಉಭಯ ಸದನಗಳ ಕಲಾಪಗಳ ಕುರಿತ ಸಂಚಿಕೆ ವಿಧಾನಮಂಡಲದಲ್ಲಿ ಇಂದು ಸಂಜೆ ೭.೪೫ ರಿಂದ ೮ ಗಂಟೆಯವರೆಗೆ ಪ್ರಸಾರವಾಗಲಿದೆ.

<><*<><>*><>

ಕಳೆದ ೧೦ ವರ್ಷಗಳಲ್ಲಿ ಕೇಂದ್ರ ಸರ್ಕಾರ ಆರೋಗ್ಯ ಮತ್ತು ಜನರ ಯೋಗಕ್ಷೇಮದತ್ತ ಹೆಚ್ಚಿನ ಗಮನ ಹರಿಸಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ತಿಳಿಸಿದ್ದಾರೆ. ಬೆಂಗಳೂರಿನ ಮಾರತ್‌ಹಳ್ಳಿಯಲ್ಲಿಂದು ಶ್ರೀ ಕೃಷ್ಣ ಸೇವಾಶ್ರಮ ಟ್ರಸ್ಟ್ ನಿರ್ಮಿಸಿರುವ ಶ್ರೀ ವಿಶ್ವೇಶ ತೀರ್ಥ ಸ್ಮಾರಕ ಆಸ್ಪತ್ರೆಯನ್ನು ಲೋಕಾರ್ಪಣೆಗೊಳಿಸಿ ಮಾತನಾಡಿದ ಅವರು, ಪೋಷಣ್ ಅಭಿಯಾನ್, ಆಯುಷ್ಮಾನ್ ಭಾರತ್, ಇಂದ್ರಧನುಷ್, ಸ್ವಚ್ಛ ಭಾರತ್ ಮತ್ತು ಜಲಜೀವನ್ ಮಿಷನ್‌ನಂತಹ ಮೊದಲಾದ ಕಾರ್ಯಕ್ರಮಗಳು ಬಡವರು ಮತ್ತು ಧೀನದಲಿತರ ಜೀವನಮಟ್ಟ ಸುಧಾರಿಸಲು ಸಹಕಾರಿಯಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಇದೇ ವೇಳೆ ಪೇಜಾವರಮಠದ ಈ ಆಸ್ಪತ್ರೆಯಲ್ಲಿ ಬಡವರು ಮತ್ತು ನಿರ್ಗತಿಕರಿಗೆ ಶೇಕಡ ೬೦ರಷ್ಟು ಹಾಸಿಗೆಗಳನ್ನು ಮೀಸಲಿಟ್ಟಿರುವುದು ಉತ್ತಮ ಕಾರ್ಯವಾಗಿದೆ ಎಂದು ತಿಳಿಸಿದ್ದಾರೆ.

<><*<><>*><>

ಮೈಸೂರು ಆಕಾಶವಾಣಿ ಆರಂಭಗೊಂಡು ೯೦ ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ಇಂದು ಮೈಸೂರು ಆಕಾಶವಾಣಿ ಕಚೇರಿಯ ಆವರಣದಲ್ಲಿ ಮೈಸೂರು ಆಕಾಶವಾಣಿ ೯೦ ನುಡಿ ನಾದ ಸಂಗಮ ಕಾರ್ಯಕ್ರಮ ನಡೆಯಿತು. ನವದೆಹಲಿ ಆಕಾಶವಾಣಿಯ ಮಹಾ ನಿರ್ದೇಶಕರಾದ ಡಾ. ಪ್ರಜ್ಞಾ ಪಾಲೀವಾಲ್ ಗೌರ್ ಕಾರ್ಯಕ್ರಮ ಉದ್ಘಾಟಿಸಿದರು. ಬಳಿಕ ಮಾತನಾಡಿದ ಅವರು, ಮೈಸೂರು ಆಕಾಶವಾಣಿಯ ಈ ಸಾಧನೆ ಐತಿಹಾಸಿಕವಾಗಿದೆ ಎಂದು ಅಭಿಪ್ರಾಯಪಟ್ಟರು.

ಧ್ವನಿ: ಪ್ರಜ್ಞಾ ಪಾಲೀವಾಲ್ ಗೌರ್

ಕಾರ್ಯಕ್ರಮದಲ್ಲಿ ಸುತ್ತೂರು ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿಗಳು, ಹಿರಿಯ ವಿದ್ವಾಂಸರಾದ ಡಾ. ಟಿ.ವಿ ವೆಂಕಟಾಚಲ ಶಾಸ್ತ್ರೀ, ಬೆಂಗಳೂರು ಆಕಾಶವಾಣಿ ದಕ್ಷಿಣ ವಿಭಾಗದ ಉಪ ನಿರ್ದೇಶಕ ಡಾ ಎನ್. ರಘು, ಸಹಾಯಕ ನಿರ್ದೇಶಕ ಟಿ.ವಿ ವಿದ್ಯಾ ಶಂಕರ್, ಸಹಾಯಕ ಅಭಿಯಂತರರಾದ ಪಿ.ಆನಂದನ್, ಮೈಸೂರು ಉಪ ನಿರ್ದೇಶಕ ಎಸ್‌ಎಸ್ ಉಮೇಶ್ ಹಾಗೂ

ಮತ್ತಿತರರು ಉಪಸ್ಥಿತರಿದ್ದರು. ಬೆಳಗ್ಗೆ ಕೋಟೆ ಆಂಜನೇಯ ಸ್ವಾಮಿ ದೇವಸ್ಥಾನ ಮುಂಭಾಗದಿಂದ ಆಕಾಶವಾಣಿ ಕಚೇರಿಯ ವರೆಗೆ ಸೈಕಲ್ ಜಾಥಾ ಏರ್ಪಡಿಸಲಾಗಿತ್ತು.

<><*<><>*><>

ಮೈಸೂರು ನಗರಾಭಿವೃದ್ಧಿ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ನಿ ಪಾರ್ವತಿ ಹಾಗೂ ಸಚಿವ ಬೈರತಿ ಸುರೇಶ್ ಅವರಿಗೆ ನೀಡಿದ್ದ ಸಮನ್ಸ್ ಅನ್ನು ಜಾರಿ ನಿರ್ದೇಶನಾಲಯ ರಾಜ್ಯ ಉಚ್ಚನ್ಯಾಯಾಲಯ ರದ್ದುಗೊಳಿಸಿದೆ. ನ್ಯಾಯಮೂರ್ತಿ ಎಂ. ನಾಗಪ್ರಸನ್ನ ನೇತೃತ್ವದ ಪೀಠ ಈ ಸಂಬಂಧ ಆದೇಶ ನೀಡಿದೆ. ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ವಿಚಾರಣೆಗೆ ಹಾಜರಾಗುವಂತೆ ಪಾರ್ವತಿ ಹಾಗೂ ಬೈರತಿ ಸುರೇಶ್‌ಗೆ ನೀಡಿ ಸಮನ್ಸ್ ಜಾರಿ ಮಾಡಿತ್ತು. ಇದಕ್ಕೆ ತಡೆ ನೀಡುವಂತೆ ಇಬ್ಬರು ಪ್ರತ್ಯೇಕವಾಗಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು.

<><*<><>*><>

ರಾಜ್ಯದಾದ್ಯಂತ ಮಕ್ಕಳ ಮೇಲಿನ ಲೈಂಗಿಕ ಹಿಂಸೆಯ ಪ್ರಕರಣಗಳು ಹೆಚ್ಚುತ್ತಿದ್ದು ಅದನ್ನು ಪರಿಣಾಮಕಾರಿಯಾಗಿ ತಡೆಗಟ್ಟುವ ನಿಟ್ಟಿನಲ್ಲಿ ಎಲ್ಲಾ ಠಾಣೆಗಳಲ್ಲೂ ಪ್ರತೀ ಗುರುವಾರ 'ತೆರೆದ ಮನೆ' ಕಾರ್ಯಕ್ರಮವನ್ನು ನಡೆಸಬೇಕು ಎಂದು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಡಾ.ತಿಪ್ಪೇಸ್ವಾಮಿ ಕೆ.ಟಿ. ತಿಳಿಸಿದ್ದಾರೆ.

ತುಮಕೂರು ಜಿಲ್ಲೆಯ ಮಕ್ಕಳ ವಿಶೇಷ ಪೊಲೀಸ್ ಘಟಕಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಸಾಮಾಜಿಕ ಜಾಲತಾಣಗಳಿಂದ ಮಕ್ಕಳ ಮೇಲಾಗುತ್ತಿರುವ ದೌರ್ಜನ್ಯಗಳನ್ನು ತಡೆಯುವ ನಿಟ್ಟಿನಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಬೇಕು, ಆ ಮೂಲಕ ಮಕ್ಕಳ ಸ್ನೇಹಿ ಪೊಲೀಸ್ ವ್ಯವಸ್ಥೆಯನ್ನು ರೂಪಿಸಬೇಕೆಂದು ಕರೆ ನೀಡಿದ್ದಾರೆ.

<><*<>ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ<>*><>